## ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 2328(2752)
ಸದಸ್ಯರ ಹೆಸರು : ಶ್ರೀ ಮರಿತಿಬ್ಬೇಗೌಡ (ಶಿಕ್ಷಕರ ಕ್ಷೇತ್ರ)
ಉತ್ತರಿಸುವ ದಿನಾಂಕ : 28-03-2022
ಉತ್ತರಿಸುವ ಸಚಿವರು : ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಹಾಗೂ ಸಕಾಲ ಸಚಿವರು.

| ಕ್ರ.ಸಂ. | ಪ್ರಶ್ನೆ | ಉತ್ತರ |
|---|---|---|
| (ಅ) | ಅನುದಾನಿತ ಶಾಲಾ ಕಾಲೇಜುಗಳ ಬೋಧಕ/ಬೋಧಕೇತರರಿಗೆ ಪ್ರಸ್ತುತ ಎಷ್ಟು ಮೊತ್ತದ ಹಬ್ಬದ ಮುಂಗಡಹಣವನ್ನು ಯಾವಾಗಿನಿಂದ ನೀಡಲಾಗುತ್ತಿದೆ. | ಖಾಸಗಿ ಅನುದಾನಿತ ಶಾಲಾ ಕಾಲೇಜುಗಳ ಸಿಬ್ಬಂದಿಗಳಿಗೆ ರೂ.10,000/-ಗಳನ್ನು ಹಬ್ಬದ ಮುಂಗಡವನ್ನಾಗಿ ದಿನಾಂಕ:12.12.2002ರಿಂದ ನೀಡಲಾಗುತ್ತಿದೆ. |
| (ಆ) | ನೀಡಿದ್ದಲ್ಲಿ, ಕಾರಣಗಳೇನು; ಎಂದಿನಿಂದ ನಿಲ್ಲಿಸಲಾಗಿದೆ; (ವಿವರ ನೀಡುವುದು) | |
| (ಇ) | ಸದರಿ ಮೊತ್ತವನ್ನು ಸರ್ಕಾರಿ ನೌಕರರಿಗೆ ನೀಡುವ ಮಾದರಿಯಲ್ಲಿ ರೂ.25,000/-ಗಳನ್ನು ಅನುದಾನಿತ ಶಾಲಾ ಕಾಲೇಜುಗಳ ಬೋಧಕ/ಬೋಧಕೇತರರಿಗೆ ವಿಸ್ತರಿಸುವಲ್ಲಿ ಸರ್ಕಾರಕ್ಕಿರುವ ತೊಂದರೆಗಳೇನು; | ಸರ್ಕಾರದ ಆದೇಶ ಸಂಖ್ಯೆ:ಆಇ 8 ಮಕಮು 2021, ದಿನಾಂಕ:14.12.2021ರಲ್ಲಿ ಸರ್ಕಾರಿ ನೌಕರರಿಗೆ ಆರ್ಥಿಕ ವರ್ಷದಲ್ಲಿ ಒಂದು ಬಾರಿಗೆ ಬಡ್ಡಿರಹಿತ ಹಬ್ಬದ ಮುಂಗಡ ಹಣವನ್ನು ರೂ.10,000/-ಗಳಿಂದ ರೂ.25,000/-ಗಳಿಗೆ ಪರಿಷ್ಕರಿಸಲಾಗಿದೆ. ಈ ಸೌಲಭ್ಯವನ್ನು ಖಾಸಗಿ ಅನುದಾನಿತ ಶಾಲಾ ಕಾಲೇಜುಗಳ ಸಿಬ್ಬಂದಿಗೆ ವಿಸ್ತರಿಸುವ ಬಗ್ಗೆ ಆರ್ಥಿಕ ಇಲಾಖೆಯೊಂದಿಗೆ ಸಮಾಲೋಚಿಸಲಾಗುವುದು. |
| (ಈ) | ಹಾಗಾದಲ್ಲಿ ಯಾವ ಕಾಲಮಿತಿಯಲ್ಲಿ ರೂ.25,000/ಗಳನ್ನು ಅನುದಾನಿತ ಶಾಲಾ ಕಾಲೇಜುಗಳ ಸಿಬ್ಬಂದಿಗಳಿಗೂ ವಿಸ್ತರಿಸಲಾಗುವುದು; | |
| (ಉ) | ಅನುದಾನಿತ ಶಾಲಾ ಕಾಲೇಜುಗಳ ಬೋಧಕ/ಬೋಧಕೇತರರಿಗೆ ಗಳಿಕೆ ರಜೆ ಮತ್ತು ನಿವೃತ್ತಿ ವೇತನವನ್ನು ನೀಡುವಲ್ಲಿ ವಿಳಂಬ ಉಂಟಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; | ರಾಜ್ಯದ ಖಾಸಗಿ ಅನುದಾನಿತ ಶಾಲಾ ಕಾಲೇಜುಗಳಲ್ಲಿ ಕಾರ್ಯ ನಿರ್ವಹಿಸಿ ನಿವೃತ್ತಿಗೊಂಡ ಬೋಧಕ/ಬೋಧಕೇತರ ಸಿಬ್ಬಂದಿಗಳಿಗೆ ನಿವೃತ್ತಿ ವೇತನ ವೆಚ್ಚಗಳಿಗೆ ನೇರವಾಗಿ ಆರ್ಥಿಕ ಇಲಾಖೆಯಿಂದ ಅನುದಾನ ಒದಗಿಸಲಾಗುತ್ತಿದೆ. ಅನುದಾನ ಲಭ್ಯತೆಗನುಗುಣವಾಗಿ ಅನುದಾನಿತ ಶಾಲಾ ಕಾಲೇಜುಗಳ ನಿವೃತ್ತ ಬೋಧಕ/ಬೋಧಕೇತರ ಸಿಬ್ಬಂದಿಗಳಿಗೆ ಗಳಿಕೆ ರಜೆ ನಗದೀಕರಣ ಮತ್ತು ನಿವೃತ್ತಿ ವೇತನ ವೆಚ್ಚಗಳನ್ನು ಭರಿಸಲಾಗುತ್ತಿದೆ. |
| (ಊ) | ಬಂದಿದ್ದಲ್ಲಿ ಯಾವ ಕಾಲಮಿತಿಯಲ್ಲಿ ಸದರಿ ಸವಲತ್ತುಗಳನ್ನು ನೀಡಲು ಸರ್ಕಾರ ಕ್ರಮಕೈಗೊಳ್ಳುವುದು? | |

ಸಂಖ್ಯೆ: ಇಪಿ 135 ಎಸ್‌ಇಎಸ್ 2022

(ಬಿ.ಸಿ.ನಾಗೇಶ್)
ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ
ಹಾಗೂ ಸಕಾಲ ಸಚಿವರು